## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2018-19ನೇ ಸಾಲಿನಲ್ಲಿ ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳಿಗೆ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ತಾತ್ಕಾಲಿಕವಾಗಿ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳುವ ಕುರಿತು.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಇಡಿ 72 ಎಸ್‌ಟಿಬಿ 2016 ದಿ:13.06.2017.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಏಕ ಕಡತ ಸಂಖ್ಯೆ:ಸಿ3(1) ಪ್ರಾ.ಶಿ.ಅ.ಶಿ.ನೇ.01/2018-19 ದಿ:09-05-2018.

* * *

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ 2017-18ನೇ ಸಾಲಿನಲ್ಲಿ ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 16,000, ಪ್ರೌಢ ಶಾಲೆಗಳಲ್ಲಿ 1,500 ಮತ್ತು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ 2,500 ಅತಿಥಿ ಶಿಕ್ಷಕರನ್ನು ಹೀಗೆ ಒಟ್ಟು 20,000 ಅತಿಥಿ ಶಿಕ್ಷಕರು/ಉಪನ್ಯಾಸಕರನ್ನು ಅಧಿಸೂಚಿತ ಪ್ರಾಥಮಿಕ/ಪ್ರೌಢ/ಪದವಿ ಪೂರ್ವ ಉಪನ್ಯಾಸಕರುಗಳು ನೇಮಕಗೊಂಡು ಕರ್ತವ್ಯಕ್ಕೆ ಹಾಜರಾಗುವವರೆಗೆ ಅಥವಾ ಮಾರ್ಚ್.2018ರವರೆಗೆ ಇದರಲ್ಲಿ ಯವುದು ಮೊದಲೊ ಅಲ್ಲಿಯವರೆಗೆ ಗೌರವ ಸಂಭಾವನೆ ಮೇಲೆ ಅತಿಥಿ ಶಿಕ್ಷಕರು/ಉಪನ್ಯಾಸಕರುಗಳನ್ನು ಕೆಲವೊಂದು ಷರತ್ತಿಗೊಳಪಡಿಸಿ ನೇಮಕ ಮಾಡಿಕೊಳ್ಳಲು ಸರ್ಕಾರದ ಅನುಮತಿ ನೀಡಲಾಗಿರುತ್ತದೆ.

ಮೇಲೆ ಓದಲಾದ (2)ರಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರು ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಮಂಜೂರಾದ ವೃಂದ ಬಲ 1,88,540 ಇದ್ದು, ಪ್ರಸ್ತುತ 1,68,053 ಶಿಕ್ಷಕರು ಪ್ರಾಥಮಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಪ್ರಸ್ತುತ ಸಾಲಿನ ನಿವೃತ್ತಿ ಪ್ರಕರಣಗಳಲ್ಲಿ ಗಣಿಸಿದಂತೆ ಒಟ್ಟು 24,891 ಹುದ್ದೆಗಳು ಖಾಲಿ ಇರುತ್ತವೆ. ಸದರಿ ಹುದ್ದೆಗಳಲ್ಲಿ ಈಗಾಗಲೇ 10,000 ಪದವೀಧರ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡುವ ಕ್ರಮ ಜಾರಿಯಲ್ಲಿದ್ದು, ಈ ಖಾಲಿ ಹುದ್ದೆಗಳಿಗೆ ಮತ್ತು ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ 2018-19ನೇ ಸಾಲಿಗೆ 3,106 ಖಾಲಿ ಹುದ್ದೆಗಳಿಗೆ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲು ಹಾಗೂ ಸದರಿ ಅತಿಥಿ ಶಿಕ್ಷಕರಿಗೆ ಮಾಸಿಕ ಗೌರವಧನ ಅನುಕ್ರಮವಾಗಿರೂ.7,500/- ಹಾಗೂ ರೂ.8,000/- ರಂತೆಒಟ್ಟು 10 ತಿಂಗಳ ಗರಿಷ್ಟ ಕಾರ್ಯನಿರ್ವಹಣಾ

--

Scanned by CamScanner

ಅವಧಿಗೆ ಅವಶ್ಯವಿರುವ ರೂ.118.60 ಕೋಟಿಗಳ ಅನುದಾನವನ್ನು ಬಿಡುಗಡೆಮಾಡಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಇಡಿ 228 ಪಿಬಿಎಸ್ 2018; ಬೆಂಗಳೂರು,**
**ದಿನಾಂಕ:14/06/2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ 2018-19ನೇ ಸಾಲಿನಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಒಟ್ಟಾರೆ, 25,600 ಹುದ್ದೆಗಳ ಎದುರಾಗಿ ಈ ಕೆಳಕಂಡಂತೆ ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡಲು ಷರತ್ತು ಮತ್ತು ನಿಬಂಧನೆಗಳನ್ವಯ ಸರ್ಕಾರದ ಮಂಜೂರಾತಿ ನೀಡಲಾಗಿದೆ.

1. 2018-19ನೇ ಸಾಲಿಗೆ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ 12500 ಹುದ್ದೆಗಳಿಗೆ ಹಾಗೂ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ 3,100 ಹುದ್ದೆಗಳು ಸೇರಿದಂತೆ ಒಟ್ಟು 15,600 ಹುದ್ದೆಗಳಿಗೆ ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲು ಹಾಗೂ
2. ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ 10,000 ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ (6 ರಿಂದ 8) ಹುದ್ದೆಗಳ ನೇರ ನೇಮಕಾತಿಗೆ ಅಧಿಸೂಚನೆ ಹೊರಡಿಸಲಾಗಿರುವ ಹುದ್ದೆಗಳಿಗೆ ಶಿಕ್ಷಕರು ಕರ್ತವ್ಯಕ್ಕೆ ವರದಿ ಮಾಡಿಕೊಂಡ ನಂತರ ತಂತಾನೆ ಅತಿಥಿ ಶಿಕ್ಷಕರ ನೇಮಕಾತಿ ರದ್ದಾಗುವ ಷರತ್ತಿಗೊಳಪಟ್ಟು ತಾತ್ಕಾಲಿಕವಾಗಿ 10,000 ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲು ಸಹ ಅನುಮತಿ ನೀಡಿದೆ.

ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ನೇಮಕ ಮಾಡಿಕೊಳ್ಳುವ ಅತಿಥಿ ಶಿಕ್ಷಕರಿಗೆ ಗೌರವ ಧನ ಪಾವತಿಸಲು ಬೇಕಾಗುವ ಜಿಲ್ಲಾವಾರು ಅನುದಾನದ ವಿವರಗಳನ್ನು ಒದಗಿಸಿದರೆ, ಲೆಕ್ಕ ಶೀರ್ಷಿಕೆ 2515-00-197-1-10-300 (Lumpsum)ರಡಿಯಲ್ಲಿ ಜಿಲ್ಲೆಗಳಿಗೆ ನೇರವಾಗಿ ಬಿಡುಗಡೆ ಮಾಡಲಾಗುವುದು.

**ಷರತ್ತುಗಳು** :-

1. ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ವಿದ್ಯಾರ್ಥಿ ಮತ್ತು ಶಿಕ್ಷಕರ ಅನುಪಾತ ಎಲ್ಲಾ ಜಿಲ್ಲೆಗಳಲ್ಲಿ ಸಮಾನವಾಗಿ ಇಲ್ಲದಿರುವುದರಿಂದ ಮತ್ತು ಕೆಲವು ಜಿಲ್ಲೆಗಳಲ್ಲಿ ಹೆಚ್ಚುವರಿ ಶಿಕ್ಷಕರು ಇರುವುದು ಕಂಡುಬಂದಿರುವುದರಿಂದ ಶಿಕ್ಷಕರನ್ನು ಮರು ಹಂಚಿಕೆ ಮಾಡಲು ತುರ್ತಾಗಿ ಕ್ರಮ ಕೈಗೊಳ್ಳುವುದು;
2. ಶಿಕ್ಷಕರ ನೇಮಕಾತಿ ಹಾಗೂ ಶಾಲಾವಾರು ಹಂಚಿಕೆ ಬಗೆಗಿನ ನೀತಿಗಳನ್ನು ಇಲಾಖೆ ಸುಧಾರಿಸುವ ಕ್ರಮವಾಗಿ ( Rationalise) ಮಾಡುವುದು.

Scanned by CamScanner

3. ನಗರ ಮತ್ತು ಪಟ್ಟಣ ಪ್ರದೇಶಗಳಲ್ಲಿ ಹೆಚ್ಚುವರಿ ಶಿಕ್ಷಕರು ಇರುವುದು ಕಂಡುಬಂದಿದ್ದು, ಅವಶ್ಯಕತೆ ಇರುವ ಕಡೆ ಮರು ಹಂಚಿಕೆ ಮಾಡುವುದು.

4. ಶಿಕ್ಷಕರ ಸಂಪನ್ಮೂಲಗಳನ್ನು ಹೆಚ್ಚು ಆರ್ಥಿಕವಾಗಿ, ಹೆಚ್ಚು ಪರಿಣಾಮಕಾರಿಯಾಗಿ ಬಳಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.

5. ಅನುದಾನಿತ ಶಾಲೆಗಳಲ್ಲಿ ಇರುವ ಹೆಚ್ಚುವರಿ ಶಿಕ್ಷಕರನ್ನು, ಕೊರತೆ ಇರುವ ಸರ್ಕಾರಿ ಶಾಲೆಗಳಲ್ಲಿ (O.O.D) ಆಧಾರದ ಮೇಲೆ ಹಂಚಿಕೆ ಮಾಡುವುದು.

6. ಕೊರತೆ ಇರುವ ಶಾಲೆಗಳಿಗೆ ಹೆಚ್ಚುವರಿ ಇರುವ ಶಾಲೆಗಳಿಂದ ಶಿಕ್ಷಕರನ್ನು ಕೂಡಲೇ ಮರು ವಿನ್ಯಾಸಿಸಲು ಕ್ರಮವಹಿಸುವುದು.

7. ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಸಂಬಂಧಿಸಿದಂತೆ ಅತಿಥಿ ಶಿಕ್ಷಕರ ಆಯ್ಕೆ ಜವಾಬ್ದಾರಿಯನ್ನು ಸಂಬಂಧಿಸಿದ ಸರ್ಕಾರಿ ಪ್ರಾಥಮಿಕ/ಪ್ರೌಢ ಶಾಲೆಯ ಮುಖ್ಯೋಪಾಧ್ಯಾಯರೇ ಮಾಡುವುದು.

8. ಪ್ರಾಥಮಿಕ ಮತ್ತು ಪ್ರೌಢ ಶಾಲಾ ಅತಿಥಿ ಶಿಕ್ಷಕರನ್ನು ಪ್ರಮುಖವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಮಾತ್ರ ನೇಮಿಸುವುದು.

9. ನೇಮಕಾತಿಗೆ ಅಧಿಸೂಚಿಸಿದ ಪ್ರಾಥಮಿಕ, ಪ್ರೌಢ ಶಿಕ್ಷಕರು ನೇಮಕಗೊಂಡು ಕರ್ತವ್ಯಕ್ಕೆ ಹಾಜರಾದ ತಕ್ಷಣ ಅತಿಥಿ ಶಿಕ್ಷಕರ ಹುದ್ದೆಗಳು ತಂತಾನೆ ರದ್ದಾಗುವುದು.

10. ಅತಿಥಿ ಶಿಕ್ಷಕರನ್ನು ಆಯಾ ಹುದ್ದೆಗೆ ನಿಗಧಿಪಡಿಸಿದ ಕನಿಷ್ಠ ವಿದ್ಯಾರ್ಹತೆಯನ್ನು ಪರಿಗಣಿಸಿ ಮೆರಿಟ್ ಆಧಾರದಲ್ಲಿ ಆಯ್ಕೆ ಮಾಡುವುದು.

11. ಪ್ರಾಥಮಿಕ ಶಾಲಾ ಅತಿಥಿ ಶಿಕ್ಷಕರ ಗೌರವ ಧನ ಮಾಹೆಯಾನ ರೂ.7,500/–, ಪ್ರೌಢ ಶಾಲಾ ಅತಿಥಿ ಶಿಕ್ಷಕರ ಗೌರವಧನ ಮಾಹೆಯಾನ ರೂ.8,000/–ಗಳನ್ನು ನಿಗಧಿಪಡಿಸಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ : ಆಇ 558 ವೆಚ್ಚ–8/2018. ದಿನಾಂಕ :13/06/2018ರಲ್ಲಿ ನೀಡಿರುವ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Nagesha Rao V. 14/6/18
(ವಿ. ನಾಗೇಶ ರಾವ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಪ್ರಾಥಮಿಕ)

ಇವರಿಗೆ:

1. ಮಹಾಲೇಖಪಾಲರು, (ಎ ಮತ್ತು ಇ) ಕರ್ನಾಟಕ, ಬೆಂಗಳೂರು
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.

Scanned by CamScanner